# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಧಾರವಾಡ ಜಿಲ್ಲೆ ಕುಂದಗೋಳ ತಾಲ್ಲೂಕು, ಶಿರೂರು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ 1) ಶ್ರೀ ವೈ.ಹೆಚ್.ಹೊಟ್ಟೆಗೌಡರ, 2) ಶ್ರೀ ಡಿ.ಎಂ.ಕಾಲವಾಡ, 3) ಶ್ರೀ ಎಂ.ವೈ.ಕೊಪ್ಪದ, 4) ಶ್ರೀ ಎ.ಜಿ.ತುಪ್ಪದಗೌಡರ, 5) ಶ್ರೀ ಕೃಷ್ಣ ಕುಮಾರ ಬಾಕಳೆ ಮತ್ತು 6) ಶ್ರೀ ಯು.ಸಿ.ತುಪ್ಪದಗೌಡರ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-1160/2015/ARLO1, ದಿನಾಂಕ:14.03.2017
2) ಮಾನ್ಯ ಉಪಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿ ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಜಿಎಂ/1160/2015/ಸನಿಕಾಸ-1, ದಿ.09.02.2017
3) ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ 08.06.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 09.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಈರಪ್ಪ ಹನುಮಂತಪ್ಪ ಹೊನ್ನಪ್ಪನವರ, ಮನೆ ನಂ.281, ಶಿರೂರು ಗ್ರಾಮ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿ, ಶಿರೂರು ಗ್ರಾಮ ಪಂಚಾಯತಿಯ 13 ನೇ ಹಣಕಾಸು ಯೋಜನೆ ಅಡಿಯಲ್ಲಿ ಎದುರುದಾರರು ರೂ.22.39 ಲಕ್ಷಗಳಿಗೂ ಹೆಚ್ಚು ಅನುದಾನದ ಹಣವನ್ನು ದುರುಪಯೋಗಪಡಿಸಿಕೊಂಡಿದ್ದು, ಈ ಬಗ್ಗೆ ಸದರಿ ಗ್ರಾಮ ಪಂಚಾಯತಿಯ ಸದಸ್ಯರು ಕುಂದಗೋಳ ತಾಲ್ಲೂಕು ಪಂಚಾಯತಿ ಕಛೇರಿ ಮುಂದೆ ದಿನಾಂಕ 03.12.2014 ರಂದು ಧರಣಿ ನಡೆಸಿದ್ದರು, ಅನುದಾನದ ಹಣದ ಖರ್ಚಿನ ವಿವರಗಳನ್ನು ಕೊಡುವಂತೆ ಹಾಗೂ ಮಾಹಿತಿ ಹಕ್ಕು ಅಧಿನಿಯಮ ಕಾಯ್ದೆ ಅಡಿಯಲ್ಲಿ ದೂರುದಾರರು ಮಾಹಿತಿ ಕೋರಿದರೂ ಸಹ ಎದುರುದಾರರು ಮಾಹಿತಿ ನೀಡಿಲ್ಲವೆಂದು ದೂರು ಸಲ್ಲಿಸಿದ್ದು, ಈ ದೂರಿನ ಬಗ್ಗೆ ಧಾರವಾಡ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ವರದಿ ಕೇಳಲಾಗಿ ಕುಂದಗೋಳ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ವರದಿ ಸಲ್ಲಿಸಿರುತ್ತಾರೆ.

ಕಡತ ಹಾಗೂ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಕೆಳಕಂಡ ಅಂಶಗಳು ಕಂಡುಬರುತ್ತವೆಂದು ಮಾನ್ಯ ಉಪಲೋಕಾಯುಕ್ತ ವರದಿಯಲ್ಲಿ ತಿಳಿಸಲಾಗಿದೆ.

"2013-14 ನೇ ಸಾಲಿನಲ್ಲಿ ಎದುರುದಾರರ ಪಂಚಾಯತಿ ವ್ಯಾಪ್ತಿಗೆ ಸಂಬಂಧಪಟ್ಟಂತೆ ಕೊಳವೆ ಬಾವಿಗಳ ದುರಸ್ತಿ ಹಾಗೂ ಪೈಪ್‌ಲೈನ್ ಅಳವಡಿಕೆಗಾಗಿ ಒಟ್ಟು ರೂ.16,89,318/- ಹಾಗೂ 2014-15 ನೇ ಸಾಲಿನಲ್ಲಿ ರೂ.18,17,674/- ನ್ನು ಖರ್ಚು ಮಾಡಿರುವ ಬಗ್ಗೆ ಲೆಕ್ಕ ಪರಿಶೋಧನೆ ವರದಿಯಲ್ಲಿ ನಮೂದಾಗಿದೆ. ಆದರೆ, ಸದರಿ ಹಣವನ್ನು ಖರ್ಚು ಮಾಡಿರುವ ಬಗ್ಗೆ ಮತ್ತು ಯಾವ ಕೊಳೆ ಬಾವಿಗಳನ್ನು ದುರಸ್ತಿ ಮಾಡಲಾಗಿದೆ ಮತ್ತು ಯಾವ ಪೈಪ್‌ಲೈನ್ ಅಳವಡಿಸಲಾಗಿದೆ ಎಂಬ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಕಾಮಗಾರಿ ನಿರ್ವಹಣೆಗೆ ಸಂಬಂಧಿಸಿದಂತೆ, ಅಗತ್ಯ ವಸ್ತುಗಳನ್ನು ಖರೀದಿಸಿ, ನಿರ್ವಹಿಸಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಕಾಮಗಾರಿ ನಿರ್ವಹಣೆ ಮಾಡಿದ ಕಾರ್ಮಿಕರಿಗೆ ಹಣ ಪಾವತಿಸಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಕಾಮಗಾರಿ ನಿರ್ವಹಣೆಗೆ ಸಂಬಂಧಿಸಿದಂತೆ, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಂದ ಅನುಮೋದನೆ ಪಡೆದಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಹಣವನ್ನು ಉಪಯೋಗಿಸಿರುವ ಬಗ್ಗೆ ಯಾವುದೇ ತಾಂತ್ರಿಕ ಧೃಢೀಕರಣ ಇಲ್ಲ. ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡಿದ ಬಗ್ಗೆಯಾಗಲೀ ಅಥವಾ ಟ್ಯಾಂಕರ್ ಮಾಲೀಕರಿಗೆ ಹಣ ಪಾವತಿಸಿರುವ ಬಗ್ಗೆ ಬಿಲ್ ಅಥವಾ ರಸೀದಿಯಿಲ್ಲ. ಕೊಳವೆ ಬಾವಿ ದುರಸ್ತಿ ಮಾಡಿರುವ ಬಗ್ಗೆ ಮತ್ತು ಈ ಬಗ್ಗೆ ಹಣ ಪಾವತಿಸಿರುವ ಬಗ್ಗೆ ಬಿಲ್ ಅಥವಾ ರಸೀದಿಯಿಲ್ಲ ಮತ್ತು ಈ ಬಗ್ಗೆ ಗ್ರಾಮ ಪಂಚಾಯತಿಗೆ ಸಂಬಂಧಿಸಿದ ತಾಂತ್ರಿಕ ಸಹಾಯಕರಿಂದ ಪರಿಶೀಲನೆ ಮಾಡಿಲ್ಲ ಮತ್ತು ಹಣವನ್ನು ನಗದು ರೂಪದಲ್ಲಿ ಪಾವತಿಸಿರುವ ಬಗ್ಗೆ 13 ನೇ ಹಣಕಾಸು ಯೋಜನೆಯಡಿ ಅವಕಾಶವಿಲ್ಲ. ಪ್ರತಿಯೊಂದು ಕಾಮಗಾರಿಯನ್ನು ನಿರ್ವಹಣೆ ಮಾಡುವ ಬಗ್ಗೆ ಸಕ್ಷಮ

ಪ್ರಾಧಿಕಾರದಿಂದ ಅನುಮೋದನೆ ಪಡೆಯಬೇಕೆಂದು 13 ನೇ ಹಣಕಾಸು ಯೋಜನೆಯಡಿ ನಮೂದಿಸಿದ್ದರೂ ಸಹ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಕಾಮಗಾರಿ ಪ್ರಾರಂಭಿಸಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ ಮತ್ತು ಕೊಳವೆ ಬಾವಿ ದುರಸ್ತಿಗಾಗಿ, ಪೈಪ್‌ಲೈನ್ ವಿಸ್ತರಣೆ ಮತ್ತು ದುರಸ್ತಿಗೆ ಹಣ ಖರ್ಚು ಮಾಡಿರುವ ಬಗ್ಗೆ ಮತ್ತು ನಿಖರವಾದ ಸ್ಥಳ ಹಾಗೂ ಕೊಳವೆ ಬಾವಿಗಳ ಸಂಖ್ಯೆಯನ್ನು ನಮೂದಿಸಿರುವುದಿಲ್ಲ. ಬಿಡುಗಡೆಯಾದ ಅನುದಾನದಲ್ಲಿ ರೂ.35,06,992/- ನ್ನು ಖರ್ಚು ಮಾಡಿದ್ದು, ಈ ಬೃಹತ್ ಮೊತ್ತವನ್ನು 16 ಕೊಳವೆ ಬಾವಿಗಳ ದುರಸ್ತಿಗಾಗಿ ಮತ್ತು ಇನ್ನುಳಿದ ಸಣ್ಣ ಕಾಮಗಾರಿಗಳಿಗೆ ವಿನಿಯೋಗಿಸಿರುವ ಬಗ್ಗೆ ನಮೂದಾಗಿದೆ. ಆದರೆ ಸದರಿ ಕಾಮಗಾರಿಗಳ ಸಂಬಂಧಪಟ್ಟಂತೆ ಯಾವುದೇ ದಾಖಲೆಗಳಿಲ್ಲ. ಸದರಿ ಕಾಮಗಾರಿಗಳ ನಿರ್ವಹಣೆ ಮಾಡುವ ಸಂದರ್ಭದಲ್ಲಿ 13 ನೇ ಹಣಕಾಸು ಯೋಜನೆಯಲ್ಲಿ ಹೇಳಲಾದ ಮಾರ್ಗಸೂಚಿಗಳನ್ನು ಎದುರುದಾರರು ಉಲ್ಲಂಘನೆ ಮಾಡಿ, ಕರ್ತವ್ಯ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ."

ಈ ಬಗ್ಗೆ ಎದುರುದಾರರಾದ ಧಾರವಾಡ ಜಿಲ್ಲೆ, ಕುಂದಗೋಳ ತಾಲ್ಲೂಕು, ಶಿರೂರು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ 1) ಶ್ರೀ ವೈ.ಹೆಚ್.ಹೊಟ್ಟಿಗೌಡರ, 2) ಶ್ರೀ ಡಿ.ಎಂ.ಕಾಲವಾಡ, 3) ಶ್ರೀ ಎಂ.ವೈ.ಕೊಪ್ಪದ, 4) ಶ್ರೀ ಎ.ಜಿ.ತುಪ್ಪದಗೌಡರ, 5) ಶ್ರೀ ಕೃಷ್ಣ ಕುಮಾರ ಬಾಕಳೆ, 6) ಶ್ರೀ ಯು.ಸಿ.ತುಪ್ಪದಗೌಡರ ಮತ್ತು ಅಧ್ಯಕ್ಷರಾಗಿದ್ದ 7) ಶ್ರೀಮತಿ ನಿಂಗವ್ವ ನೀಲಪ್ಪ ಚಲವಾದಿ (ಇನ್ನು ಮುಂದೆ ಎದುರುದಾರರು 1 ರಿಂ 7 ಎಂದು ಕರೆಯಲ್ಪಡುತ್ತಾರೆ) ಇವರುಗಳ ಇವರಿಂದ ಆಕ್ಷೇಪಣೆಗಳನ್ನು ಕೇಳಲಾಗಿ, ಎದುರುದಾರರು ಸಲ್ಲಿಸಿರುವ ಆಕ್ಷೇಪಣೆಗಳನ್ನು, ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರ 1 ರಿಂ 6 ರ ವಿರುದ್ಧದ ನಡವಳಿಗಳನ್ನು ಕೈಬಿಡಲು ಸೂಕ್ತ, ಸಮಂಜಸ, ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬಂದಿದ್ದು, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವೆ(ನಡತೆ) ನಿಯಮ 1966 ರ ನಿಯಮಗಳು 3(1) ರನ್ವಯ ಇಲಾಖಾ ಶಿಸ್ತು ಕ್ರಮ ಜರುಗಿಸಲು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರಡಿ ಪ್ರದತ್ತವಾದ ಅಧಿಕಾರದಡಿ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಲಾಗುತ್ತಿದ್ದು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14(ಎ) ರಡಿ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ, 7 ನೇ ಎದುರುದಾರರು ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರಾಗಿರುವುದರಿಂದ 7 ನೇ ಎದುರುದಾರರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಕ್ರಮ ಜರುಗಿಸಲು ಸಕ್ಷಮ ಪ್ರಾಧಿಕಾರಿಯಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಧಾರವಾಡ ಇವರಿಗೆ ಮೇಲೆ ಓದಲಾದ (3) ರಲ್ಲಿ ಸೂಚಿಸಲಾಗಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರ 1 ರಿಂದ 6 ರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 236 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 08.06.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಧಾರವಾಡ ಜಿಲ್ಲೆ, ಕುಂದಗೋಳ ತಾಲ್ಲೂಕು, ಶಿರೂರು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ 1) ಶ್ರೀ ವೈ.ಹೆಚ್.ಹೊಟ್ಟಿಗೌಡರ, 2) ಶ್ರೀ ಡಿ.ಎಂ.ಕಾಲವಾಡ, 3) ಶ್ರೀ ಎಂ.ವೈ.ಕೊಪ್ಪದ, 4) ಶ್ರೀ ಎ.ಜಿ.ತುಪ್ಪದಗೌಡರ, 5) ಶ್ರೀ ಕೃಷ್ಣ ಕುಮಾರ ಬಾಕಳೆ ಮತ್ತು 6) ಶ್ರೀ ಯು.ಸಿ.ತುಪ್ಪದಗೌಡರ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಧಾರವಾಡ ಜಿಲ್ಲಾ ಪಂಚಾಯತಿ, ಧಾರವಾಡ.
5) ಕಾರ್ಯನಿರ್ವಾಹಕ ಅಧಿಕಾರಿ, ಕುಂದಗೋಳ ತಾಲ್ಲೂಕು ಪಂಚಾಯತಿ, ಕುಂದಗೋಳ, ಧಾರವಾಡ ಜಿಲ್ಲೆ.
6) ಧಾರವಾಡ ಜಿಲ್ಲೆ, ಕುಂದಗೋಳ ತಾಲ್ಲೂಕು, ಶಿರೂರು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ 1) ಶ್ರೀ ವೈ.ಹೆಚ್.ಹೊಟ್ಟಿಗೌಡರ, 2) ಶ್ರೀ ಡಿ.ಎಂ.ಕಾಲವಾಡ, 3) ಶ್ರೀ ಎಂ.ವೈ.ಕೊಪ್ಪದ, 4) ಶ್ರೀ ಎ.ಜಿ.ತುಪ್ಪದಗೌಡರ, 5) ಶ್ರೀ ಕೃಷ್ಣ ಕುಮಾರ ಬಾಕಳೆ ಮತ್ತು 6) ಶ್ರೀ ಯು.ಸಿ.ತುಪ್ಪದಗೌಡರ ಇವರುಗಳಿಗೆ.
   (ಕಾರ್ಯನಿರ್ವಾಹಕ ಅಧಿಕಾರಿ, ಕುಂದಗೋಳ ತಾಲ್ಲೂಕು ಪಂಚಾಯತಿ ಇವರ ಮುಖಾಂತರ)
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.